ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಯಲಹಂಕ ವಲಯ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ/ಬ್ಯಾ.ವಿ/ಪಿ.ಆರ್/39/2022–23

ಕಾರ್ಯಪಾಲಕ ಅಭಿಯಂತರರು ಕಛೇರಿ
ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ,
ಬೆಂಗಳೂರು. ದಿನಾಂಕ: 19–01–2023

ಆಡಳಿತಾತ್ಮಕ ಅನುಮೋದನೆ

ವಿಷಯ: CONSTRUCTION OF DRAINS AND CULVERTS IN THANISANDRA VILLAGE AND SARAIPALYA AND SURROUNDING AREAS IN WARD NO. 06, NEW WARD NO. 07.

ಉಲ್ಲೇಖ: ವಾರ್ಡ್ ಮಟ್ಟದ ಲೋಕೋಪಯೋಗಿ ಕಾಮಗಾರಿ, ನಗರ ಯೋಜನೆ ಹಾಗೂ ಮೂಲ ಸೌಕರ್ಯ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಿಗಳನ್ನು ಚಲಾಯಿಸಿ ಮಾನ್ಯ ಆಡಳಿತಗಾರರ ದಿನಾಂಕ: 09–01–2023 ರಂದು ನಡೆದ ಸಭೆಯ ವಿಷಯದ ಸಂಖ್ಯೆ: 371/2022–23.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, CONSTRUCTION OF DRAINS AND CULVERTS IN THANISANDRA VILLAGE AND SARAIPALYA AND SURROUNDING AREAS IN WARD NO. 06, NEW WARD NO. 07 ಕಾಮಗಾರಿಗೆ 2022–23ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ ಪಿ–2178 ರಡಿಯಲ್ಲಿ ರೂ. 300.00 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗಿರುತ್ತದೆ.

ಮುಂದುವರೆದು, ಉಲ್ಲೇಖದ ವಾರ್ಡ್ ಮಟ್ಟದ ಲೋಕೋಪಯೋಗಿ ಕಾಮಗಾರಿ, ನಗರ ಯೋಜನೆ ಹಾಗೂ ಮೂಲ ಸೌಕರ್ಯ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಿಗಳನ್ನು ಚಲಾಯಿಸಿ ಮಾನ್ಯ ಆಡಳಿತಗಾರರ ದಿನಾಂಕ: 09–01–2023 ರಂದು ನಡೆದ ಸಭೆಯ ವಿಷಯದ ಸಂಖ್ಯೆ: 372/2022–23 ರಂತೆ ಪ್ರಸ್ತಾಪಿತ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಿದ್ದು, ಮಾನ್ಯ ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ. ರವರ ಕಛೇರಿ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/21–22, ದಿನಾಂಕ: 18–01–2022 ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಅನುಮೋದನೆ ಪುಸ್ತಕದ ಪುಟ ಸಂಖ್ಯೆ: 12 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
3. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
6. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
7. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
8. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
9. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ–ಬಿಎಂ–ಬಿಸಿ/WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಕಾರ್ಯಪಾಲಕ ಅಭಿಯಂತರರು
ಬ್ಯಾಟರಾಯನಪುರ ವಿಭಾಗ,
ಬಿ.ಬಿ.ಎಂ.ಪಿ ಬೆಂಗಳೂರು–92

ಪ್ರತಿಯನ್ನು:

1) ಮಾನ್ಯ ಜಂಟಿ ಆಯುಕ್ತರು (ಯಲಹಂಕ) ವಲಯ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ.
2) ಕಾರ್ಯಪಾಲಕ ಅಭಿಯಂತರರು (ಗುಣ ನಿಯಂತ್ರಣ) ವಿಭಾಗ ರವರ ಮಾಹಿತಿಗಾಗಿ.